ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 91 ತಾಪಸ 2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ 22.07.2015

# ಸುತ್ತೋಲೆ

**ವಿಷಯ :** 2014–15ನೇ ಸಾಲಿಗೆ ಗಾಂಧಿ ಗ್ರಾಮ ಪುರಸ್ಕಾರ ಯೋಜನೆಯಡಿ ಪುರಸ್ಕಾರಕ್ಕಾಗಿ ಅರ್ಜಿ ಸಲ್ಲಿಸಿರುವ ಗ್ರಾಮ ಪಂಚಾಯತಿಗಳ ಪ್ರಸ್ತಾವನೆಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ವರದಿಸಲು ಸಮಿತಿಯನ್ನು ರಚಿಸುವ ಕುರಿತು.

**ಉಲ್ಲೇಖ :** (1) ಸಮ ಸಂಖ್ಯೆಯ ಸರ್ಕಾರದ ಆದೇಶ, ದಿನಾಂಕ:18.06.2015
(2) ಸಮ ಸಂಖ್ಯೆಯ ತಿದ್ದುಪಡಿ ಆದೇಶ, ದಿನಾಂಕ:30.06.2015

***

2014–15ನೇ ಸಾಲಿನಲ್ಲಿ ರಾಜ್ಯದಲ್ಲಿ ಉತ್ತಮ ಸಾಧನೆ ಮಾಡಿರುವ ಗ್ರಾಮ ಪಂಚಾಯತಿಗಳನ್ನು ಪ್ರತಿ ತಾಲ್ಲೂಕಿಗೆ ಒಂದರಂತೆ ಗುರುತಿಸಿ "ಗಾಂಧಿ ಗ್ರಾಮ ಪುರಸ್ಕಾರ" ಯೋಜನೆಯಡಿ ನಗದು ಬಹುಮಾನವನ್ನು ನೀಡಿ ಪುರಸ್ಕರಿಸಲು ರಾಜ್ಯ ಸರ್ಕಾರವು ಯೋಜಿಸಿದೆ. ಪುರಸ್ಕಾರಕ್ಕಾಗಿ ಅರ್ಹತೆ ಪಡೆಯಲು ಗ್ರಾಮ ಪಂಚಾಯತಿಗಳು "ಗಾಂಧಿ ಗ್ರಾಮ ಪುರಸ್ಕಾರ ಯೋಜನೆಗಾಗಿ ಅರ್ಜಿ" ಶೀರ್ಷಿಕೆಯಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚತಂತ್ರ ತಂತ್ರಾಂಶದಲ್ಲಿ ಲಭ್ಯಗೊಳಿಸಲಾಗಿದ್ದ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಉಲ್ಲೇಖ (1) ಮತ್ತು (2) ರ ಆದೇಶಗಳ ಮೂಲಕ ಗ್ರಾಮ ಪಂಚಾಯತಿಗಳಿಗೆ ಸೂಚನೆಗಳನ್ನು ನೀಡಲಾಗಿತ್ತು. ಅರ್ಜಿ ಸಲ್ಲಿಸಲು ದಿನಾಂಕ:30.07.2015ನ್ನು ಅಂತಿಮ ದಿನಾಂಕವನ್ನಾಗಿ ಗೊತ್ತುಪಡಿಸಲಾಗಿದೆ. ಅದರಂತೆ ಪುರಸ್ಕಾರಕ್ಕಾಗಿ ಪ್ರತಿ ತಾಲ್ಲೂಕಿನಲ್ಲಿ ಒಂದಕ್ಕಿಂತ ಹೆಚ್ಚು ಗ್ರಾಮ ಪಂಚಾಯತಿಗಳು ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿವೆ. ಪ್ರತಿ ತಾಲ್ಲೂಕಿಗೆ ಒಂದರಂತೆ ಮಾತ್ರ ರಾಜ್ಯದಿಂದ ಒಟ್ಟು 176 ಗ್ರಾಮ ಪಂಚಾಯತಿಗಳನ್ನು ಪುರಸ್ಕಾರಕ್ಕಾಗಿ ಆಯ್ಕೆ ಮಾಡಬೇಕಾಗಿರುತ್ತದೆ.

ಉಲ್ಲೇಖ (1) ಮತ್ತು (2) ರ ಸರ್ಕಾರದ ಆದೇಶಗಳಲ್ಲಿ ತಿಳಿಸಿದಂತೆ; ಗ್ರಾಮ ಪಂಚಾಯತಿಗಳು ಆನ್‌ಲೈನ್‌ನಲ್ಲಿ ಸಾಂಸ್ಥಿಕ ಮತ್ತು ಪ್ರಗತಿ ಸೂಚ್ಯಂಕಗಳ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ಅರ್ಜಿ ಸಲ್ಲಿಸುತ್ತಿವೆ. ಈ ಸೂಚ್ಯಂಕಗಳ ಎದುರಾಗಿ ಪ್ರತಿ ತಾಲ್ಲೂಕಿನಲ್ಲಿ ಅತಿ ಹೆಚ್ಚು ಅಂಕ ಗಳಿಸುವ ಗ್ರಾಮ ಪಂಚಾಯತಿಗಳು ಪುರಸ್ಕಾರಕ್ಕೆ ಅರ್ಹತೆ ಪಡೆಯಲಿವೆ. ಅರ್ಹತೆ ಪಡೆದ ಗ್ರಾಮ ಪಂಚಾಯತಿಗಳು ಅರ್ಜಿ ಸಲ್ಲಿಸುವಾಗ ಒದಗಿಸಿರುವ ಅಂಕಿ ಅಂಶಗಳು ಅಥವಾ ಮಾಹಿತಿಗಳನ್ನು ಉಲ್ಲೇಖಿಸಿ ಆ ಗ್ರಾಮ ಪಂಚಾಯತಿಯಲ್ಲಿ ಲಭ್ಯವಿರುವ ದಾಖಲೆಗಳು ಮತ್ತು ಇತರೆ ಮೂಲಗಳ ಆಧಾರದಲ್ಲಿ ಪರಿಶೀಲಿಸಿ ಪ್ರತಿ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಗಳನ್ನು ಪುರಸ್ಕಾರಕ್ಕಾಗಿ ಆಯ್ಕೆ ಮಾಡಬೇಕಾಗಿರುತ್ತದೆ. ಈ ಕಾರಣಕ್ಕಾಗಿ ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ಮೂರನೇ ವ್ಯಕ್ತಿ ಪರಿಶೀಲನೆಗಾಗಿ ಗೊತ್ತುಪಡಿಸಲಾಗಿದ್ದ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯನ್ನು ಈ ಕಾರ್ಯಗಳಿಂದ ರದ್ದುಪಡಿಸಿ ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪರಿಶೀಲನಾ/ಆಯ್ಕೆ ಸಮಿತಿಯನ್ನು ಈ ಕೆಳಗಿನಂತೆ ರಚಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ಅಧಿಕಾರಿಗಳು | ಸಮಿತಿಯಲ್ಲಿನ ಪದನಾಮ |
|---|---|---|
| 1 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ | ಅಧ್ಯಕ್ಷರು |
| 2 | ಗ್ರಾಮ ಪಂಚಾಯತಿ ವಿಷಯಗಳನ್ನು ನಿರ್ವಹಿಸುವ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ | ಸದಸ್ಯ ಕಾರ್ಯದರ್ಶಿ |
| 3 | ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತಿ | ಸದಸ್ಯರು |
| 4 | ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತಿ | ಸದಸ್ಯರು |
| 5 | ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತಿ | ಸದಸ್ಯರು |
| 6 | ಜಿಲ್ಲಾ ಮಾಹಿತಿ ಅಧಿಕಾರಿ, ಎನ್.ಐ.ಸಿ., ಜಿಲ್ಲಾ ಕೇಂದ್ರ | ಸದಸ್ಯರು |
| 7 | ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು | ಸದಸ್ಯರು |

ಜಿಲ್ಲಾ ಪರಿಶೀಲನಾ/ಆಯ್ಕೆ ಸಮಿತಿಯು ಅತಿ ಹೆಚ್ಚು ಅಂಕ ಪಡೆದ ಮೊದಲ ಮೂರು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಗ್ರಾಮ ಪಂಚಾಯತಿಗಳು ಒದಗಿಸಿರುವ ಅಂಕಿ ಅಂಶಗಳು ಮತ್ತು ಮಾಹಿತಿಗಳನ್ನು ಪರಿಶೀಲಿಸಲು ಸದರಿ ಗ್ರಾಮ ಪಂಚಾಯತಿಗಳ ಒಟ್ಟಾರೆ ನಿರ್ವಹಣೆ, ಸ್ವಚ್ಛತೆ ಬಗ್ಗೆ ಸ್ಥಳ ತನಿಖೆ ಮಾಡಿ ತಮ್ಮ ಸ್ಪಷ್ಟ ಅಭಿಪ್ರಾಯವನ್ನು ನೀಡಲು ಈ ಕೆಳಕಾಣಿಸಿದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳೆಂದು ನೇಮಿಸಿ ಸದರಿಯವರ ಸೇವೆಯನ್ನು ಪಡೆಯಬಹುದು. ಜಿಲ್ಲೆಗೆ ಹತ್ತು ತಾಲ್ಲೂಕು ಪಂಚಾಯತಿಗಳಿದ್ದಲ್ಲಿ ತಾಲ್ಲೂಕಿಗೆ ಒಬ್ಬರಂತೆ ಕೆಳಗೆ ತಿಳಿಸಿದ ಹತ್ತು ಜನ ಅಧಿಕಾರಿಗಳು ಅಥವಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸುವ ಇತರೆ ಅಧಿಕಾರಿಗಳ ಸೇವೆಯನ್ನು ಪಡೆಯಬಹುದು.

| ಕ್ರ.ಸಂ. | ನೋಡಲ್ ಅಧಿಕಾರಿಗಳು (ತಾಲ್ಲೂಕಿಗೆ ಒಬ್ಬರಂತೆ) | ಪರಿಶೀಲನೆಗೆ ಗೊತ್ತುಪಡಿಸಬಹುದಾದ ಗ್ರಾ.ಪಂ.ಗಳ ಸಂಖ್ಯೆ | ಷರಾ |
|---|---|---|---|
| 1 | ಉಪ ಕಾರ್ಯದರ್ಶಿ – 1, ಜಿಲ್ಲಾ ಪಂಚಾಯತಿ | 03 | ಈ ಅಧಿಕಾರಿಗಳಿಗೆ ಸ್ಥಳ ಭೇಟಿ ನೀಡಿ ಪರಿಶೀಲಿಸುವಾಗ ಆಯಾ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಅಗತ್ಯ ಸಹಕಾರ ನೀಡುವುದು |
| 2 | ಉಪ ಕಾರ್ಯದರ್ಶಿ – 2, ಜಿಲ್ಲಾ ಪಂಚಾಯತಿ | 03 | |
| 3 | ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತಿ | 03 | |
| 4 | ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತಿ | 03 | |
| 5 | ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತಿ | 03 | |
| 6 | ಸಹಾಯಕ ಕಾರ್ಯದರ್ಶಿ–I,ಜಿಲ್ಲಾ ಪಂಚಾಯತಿ | 03 | |
| 7 | ಸಹಾಯಕ ಕಾರ್ಯದರ್ಶಿ–2, ಜಿಲ್ಲಾ ಪಂಚಾಯತಿ | 03 | |
| 8 | ಸಹಾಯಕ ಲೆಕ್ಕಾಧಿಕಾರಿ–1, ಜಿಲ್ಲಾ ಪಂಚಾಯತಿ | 03 | |
| 9 | ಸಹಾಯಕ ಲೆಕ್ಕಾಧಿಕಾರಿ–2, ಜಿಲ್ಲಾ ಪಂಚಾಯತಿ | 03 | |
| 10 | ಸಹಾಯಕ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ | 03 | |

**ಜಿಲ್ಲಾ ಪರಿಶೀಲನಾ/ಆಯ್ಕೆ ಸಮಿತಿಯು ಪರಿಶೀಲನೆ ಸಮಯದಲ್ಲಿ ಗಮನದಲ್ಲಿಡಬೇಕಾದ ಅಂಶಗಳು:**

1. ಪುರಸ್ಕಾರವು 2014–15 ನೇ ಸಾಲಿಗೆ ಸಂಬಂಧಿಸಿದ್ದಾಗಿರುವುದರಿಂದ, 2014–15 ನೇ ಸಾಲಿಗೆ ಸಂಬಂಧಿಸಿದ ದಾಖಲೆಗಳನ್ನು ಮಾತ್ರ ಮೌಲ್ಯಮಾಪನ ಹಾಗೂ ಪರಿಶೀಲನೆಗೆ ಪರಿಗಣಿಸುವುದು.
2. ಆನ್‌ಲೈನ್ ಅರ್ಜಿಯ ಪ್ರಶ್ನೆಗಳಿಗೆ ಉತ್ತರವಾಗಿ ನಮೂದಿಸಿದ ಅಂಶಗಳ ಪೂರಕ ದಾಖಲೆಗಳನ್ನು ಪರಿಶೀಲಿಸುವುದು.
3. ನೋಡಲ್ ಅಧಿಕಾರಿಗಳು ತಮಗೆ ನಿಗಧಿಪಡಿಸಿದ ತಾಲ್ಲೂಕಿಗೆ ಸಂಬಂಧಪಟ್ಟಂತೆ ಮೌಲ್ಯಮಾಪನ/ಪರಿಶೀಲನೆಯನ್ನು ಸಂಬಂಪಟ್ಟ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಂಬಂಧಪಟ್ಟ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳ ಸಮ್ಮುಖದಲ್ಲಿ ನಡೆಸುವುದು. ಕಾರ್ಯನಿರ್ವಾಹಕ ಅಧಿಕಾರಿಗಳು ನೋಡಲ್ ಅಧಿಕಾರಿಗಳೊಂದಿಗೆ ಸಂಪರ್ಕವಿಟ್ಟುಕೊಂಡು ದಿನಾಂಕ 01.08.2015 ರಿಂದ 06.08.2015 ರೊಳಗೆ ದಾಖಲೆ ಪರಿಶೀಲನೆ ಹಾಗೂ ಸ್ಥಳ ತನಿಖೆಗಳನ್ನು ಮುಗಿಸಿಕೊಳ್ಳುವುದು.
4. ಪರಿಶೀಲನೆಯ ನಂತರ ವರದಿಗೆ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಂಬಂಧಪಟ್ಟ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ದೃಢೀಕರಣ ಪಡೆದುಕೊಳ್ಳುವುದು.
5. ಒಂದು ತಾಲ್ಲೂಕಿಗೆ ಹೆಚ್ಚು ಅಂಕ ಪಡೆದ ಮೊದಲ ಮೂರು ಗ್ರಾಮ ಪಂಚಾಯತಿಗಳ ಹೆಸರುಗಳನ್ನು ತಮಗೆ ಕಳುಹಿಸಿಕೊಡಲಾಗುತ್ತಿದ್ದು, ಅತಿ ಹೆಚ್ಚು ಅಂಕ ಪಡೆದ ಗ್ರಾಮ ಪಂಚಾಯತಿಯನ್ನು ಮೊದಲು ಮೌಲ್ಯಮಾಪನ/ಆಯ್ಕೆಗೆ ಪರಿಗಣಿಸುವುದು. ಈ ಗ್ರಾಮ ಪಂಚಾಯತಿಯ ಮೌಲ್ಯಮಾಪನದಲ್ಲಿ ಪಂಚತಂತ್ರ ತಂತ್ರಾಂಶದಲ್ಲಿ ಉತ್ತರಿಸಿದ ಅಂಶಗಳಿಗೆ ಪೂರಕ ದಾಖಲೆಗಳು ಸಮರ್ಪಕವಾಗಿರದಿದ್ದಲ್ಲಿ, ಹೆಚ್ಚು ಅಂಕ ಪಡೆದ ಎರಡನೇ ಗ್ರಾಮ ಪಂಚಾಯತಿಯನ್ನು ಮೌಲ್ಯಮಾಪನ/ಆಯ್ಕೆಗೆ ಪರಿಗಣಿಸುವುದು. ಎರಡನೇ ಗ್ರಾಮ ಪಂಚಾಯತಿಯ ಮೌಲ್ಯಮಾಪನದಲ್ಲಿ ಪಂಚತಂತ್ರ ತಂತ್ರಾಂಶದಲ್ಲಿ ಉತ್ತರಿಸಿದ ಅಂಶಗಳಿಗೆ ಪೂರಕ ದಾಖಲೆಗಳೂ ಸಹ ಸಮರ್ಪಕವಾಗಿರದಿದ್ದಲ್ಲಿ, ಹೆಚ್ಚು ಅಂಕ ಪಡೆದ ಮೂರನೇ ಗ್ರಾಮ ಪಂಚಾಯತಿಯನ್ನು ಮೌಲ್ಯಮಾಪನ/ಆಯ್ಕೆಗೆ ಪರಿಗಣಿಸುವುದು.

**ಆಯ್ಕೆ ಸಮಿತಿಯ ಸದಸ್ಯರು ಪರಿಶೀಲನೆ ಮಾಡಬೇಕಾದ ವಿಷಯಗಳು:**

1. ಲೆಕ್ಕ ಪರಿಶೋಧನೆ ಹಾಗೂ ಆಯವ್ಯಯಕ್ಕೆ ಸಂಬಂಧಿಸಿದ ಅಂಶಗಳ ಬಗ್ಗೆ ದಾಖಲೆಗಳ ಪರಿಶೀಲನೆ ನಡೆಸುವುದು.
2. ಪಂಚತಂತ್ರ ತಂತ್ರಾಶಕ್ಕೆ ಸಂಬಂಧಿಸಿದಂತೆ, ಅರ್ಜಿಯಲ್ಲಿನ ಪ್ರಶ್ನೆಗಳಿಗೆ ಉತ್ತರಿಸಿದಂತೆ, ತಂತ್ರಾಂಶದಲ್ಲಿ ಸರಿಯಾದ ರೀತಿಯಲ್ಲಿ ಮಾಹಿತಿ ದಾಖಲಿಸಿದ್ದರೇಯೇ ಎಂದು ಪರಿಶೀಲಿಸುವುದು.
3. ಇನ್ನುಳಿದಂತೆ ಗ್ರಾಮ ಪಂಚಾಯತಿಗಳ ಆಸ್ತಿಗಳು, ಗ್ರಾಮ ಪಂಚಾಯಿತಿಗಳ ಸಭೆಗಳು, ಗ್ರಾಮಸಭೆಗಳು, ವಾರ್ಡ್ ಸಭೆಗಳು ಹಾಗೂ ಇತರೆ ಗ್ರಾಮ ಪಂಚಾಯತಿಗಳ ಮೂಲ ಪ್ರಕಾರ್ಯಗಳಿಗೆ ಸಂಬಂಧಿಸಿದ ಅಂಶಗಳ ದಾಖಲೆ ಪರಿಶೀಲನೆ ನಡೆಸುವುದು.
4. ಒಟ್ಟಾರೆ ನಿರ್ವಹಣೆ, ಸ್ವಚ್ಛತೆ ಹಾಗೂ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಸಂಬಂಧಿಸಿದಂತೆ ದಾಖಲೆ ಹಾಗೂ ಕಾಮಗಾರಿ ಪರಿಶೀಲನೆ ನಡೆಸುವುದು.

ಪ್ರತಿ ತಾಲ್ಲೂಕಿಗೆ ಅತಿ ಹೆಚ್ಚು ಅಂಕ ಗಳಿಸಿ ಪುರಸ್ಕಾರಕ್ಕೆ ಅರ್ಹತೆ ಪಡೆದಿರುವ ಮೂರು ಗ್ರಾಮ ಪಂಚಾಯತಿಗಳ ಪಟ್ಟಿಯನ್ನು ಪ್ರತಿ ಜಿಲ್ಲೆಗೆ ಕಳುಹಿಸಿಕೊಡಲಾಗುವುದು. ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳ ನೇತೃತ್ವದಲ್ಲಿ, ಈ ಆಯ್ಕೆ ಸಮಿತಿಯ ಮೂಲಕ ಗ್ರಾಮ ಪಂಚಾಯತಿಗಳು ಆನ್‌ಲೈನ್ ಅರ್ಜಿಯ ಪ್ರಶ್ನೆಗಳಿಗೆ ಉತ್ತರವಾಗಿ ನಮೂದಿಸಿದ ಅಂಶಗಳಿಗೆ ಪೂರಕವಾಗಿ ಮೌಲ್ಯಮಾಪನ ಹಾಗೂ ದಾಖಲೆಗಳನ್ನು ಆಯಾ ಗ್ರಾಮ ಪಂಚಾಯತಿಗಳಲ್ಲಿ ಪರಿಶೀಲನೆ ಮಾಡುವುದು. ಸದರಿ ಗ್ರಾಮ ಪಂಚಾಯತಿಯು ಗಾಂಧಿ ಗ್ರಾಮ ಪುರಸ್ಕಾರಕ್ಕೆ ಅರ್ಹವೇ ಎಂಬ ಬಗ್ಗೆ ಸ್ಥಳ ತನಿಖೆಯನ್ನು ಮಾಡಿ ಗ್ರಾಮ ಪಂಚಾಯತಿಯು ಗಾಂಧಿ ಗ್ರಾಮ ಪುರಸ್ಕಾರಕ್ಕೆ ಅರ್ಹತೆ ಪಡೆದಿದೆ ಎಂದು ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಸಹಿಯೊಂದಿಗೆ ಸರ್ಕಾರಕ್ಕೆ ದಿನಾಂಕ:15.08.2015ರೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸಲು ಮತ್ತೊಮ್ಮೆ ತಿಳಿಸಿದೆ.

(ಕೆ.ಯಾಲಕ್ಕಿಗೌಡ) 23/7/15
ನಿರ್ದೇಶಕರು (ಪಂ.ರಾಜ್–1) ಹಾಗು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
3. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು. (ಆಯಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ಕರ್ನಾಟಕ ವಿಕಸ ಮಾಸಪತ್ರಿಕೆಯಲ್ಲಿ ಪ್ರಕಟಿಸಲು.
5. ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
6. ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸನ್ಮಾನ್ಯ ಮುಖ್ಯಮಂತ್ರಿಗಳ ಸಚಿವಾಲಯ, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಎಲ್ಲಾ ಆಯುಕ್ತರು/ನಿರ್ದೇಶಕರು/ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
9. ಸರ್ಕಾರದ ಅಪರ ಕಾರ್ಯದರ್ಶಿ/ಉಪ ಕಾರ್ಯದರ್ಶಿ(ಆಡಳಿತ), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10. ಮುಖ್ಯಸ್ಥರು, ಗ್ರಾಮ ಸ್ವರಾಜ್ ಇಲಾಖೆ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.